ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ  ದಿನಾಂಕ : DATE : 10/4/21

# 6ನೇ ವೇತನ ಆಯೋಗ ಜಾರಿ ಅಸಾಧ್ಯ: ಸಿಎಂ

## ಸಾರಿಗೆ ಮುಷ್ಕರ ಸಂಬಂಧ ಯಾರೊಂದಿಗೂ ಮಾತನಾಡುವುದಿಲ್ಲ। ಯಾರದ್ದೋ ಮಾತು ಕೇಳಿ ಹಠಕ್ಕೆ ಬಿದ್ದು ಪ್ರತಿಭಟಿಸಬಾರದು

## ಕೆಲವು ನೌಕರರು ಬಸ್ ಓಡಿಸಲು ಬಂದಿದ್ದಾರೆ, ಎಲ್ಲರೂ ಕರ್ತವ್ಯಕ್ಕೆ ಹಾಜರಾಗಿ। ಮುಷ್ಕರ ನಿರತರಿಗೆ ಮುಖ್ಯಮಂತ್ರಿ ಮನವಿ

• **ಕನ್ನಡಪ್ರಭ ವಾರ್ತೆ** ಬೆಂಗಳೂರು 10.4.21

ಯಾವುದೇ ಕಾರಣಕ್ಕೂ ಸಾರಿಗೆ ನೌಕರರಿಗೆ 6ನೇ ವೇತನ ಆಯೋಗದ ಶಿಫಾರಸನ್ನು ಜಾರಿಗೊಳಿಸಲು ಸಾಧ್ಯವೇ ಇಲ್ಲ ಎಂದು ಮತ್ತೊಮ್ಮೆ ಸ್ಪಷ್ಟಪಡಿಸಿರುವ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಇನ್ನು ಸಾರಿಗೆ ಮುಷ್ಕರ ಸಂಬಂಧ ಮಾತನಾಡುವ ಪ್ರಶ್ನೆಯೇ ಇಲ್ಲ ಎಂದು ಹೇಳುವ ಮೂಲಕ ಸಂಧಾನ ಬಾಗಿಲನ್ನು ಮುಚ್ಚಲಾಗಿದೆ ಎಂಬ ಸಂದೇಶವನ್ನು ರವಾನಿಸಿದ್ದಾರೆ.



ಶುಕ್ರವಾರ ತಮ್ಮ ಗೃಹ ಕಚೇರಿ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಾರಿಗೆ ನೌಕರರು ತಕ್ಷಣವೇ ಮುಷ್ಕರ ಕೈ ಬಿಟ್ಟು ಕರ್ತವ್ಯಕ್ಕೆ ಹಾಜರಾಗಬೇಕು. ಪ್ರಸ್ತುತ ಸಂಕಷ್ಟದ ಪರಿಸ್ಥಿತಿಯಲ್ಲಿ ಸಾರಿಗೆ ಸಿಬ್ಬಂದಿಗೆ 6ನೇ ವೇತನ ಆಯೋಗದ ಶಿಫಾರಸು ಜಾರಿ ಮಾಡಲು ಆಗುವುದಿಲ್ಲ. ಯಾರದ್ದೋ ಮಾತು ಕೇಳಿ ಹಠಕ್ಕೆ ಬಿದ್ದು ಪ್ರತಿಭಟನೆ ನಡೆಸಬಾರದು ಎಂದು ಮನವಿ ಮಾಡಿದರು.

ನೌಕರರ ಹಿತ ಕಾಪಾಡಲು ಸರ್ಕಾರ ಬದ್ಧವಿದೆ. ನೌಕರರ ಒಂಬತ್ತು ಬೇಡಿಕೆ ಪೈಕಿ ಎಂಟು ಬೇಡಿಕೆಗಳನ್ನು ಈಡೇರಿಸಲಾಗಿದೆ. ಆದರೂ ಮುಷ್ಕರಕ್ಕೆ ಗೊಳ್ಳಲಾಗಿದೆ. ಯಾರ ಹತ್ತಿರವೂ ಮಾತನಾಡುವ ಪ್ರಶ್ನೆಯೇ ಇಲ್ಲ, ಅನಿಸಿದಂತೆ ಮಾಡಲಿ ಎಂದರು.

ಹಲವು ನೌಕರರು ಬಸ್ ಓಡಿಸಲು ಪ್ರಾರಂಭಿಸಿದ್ದಾರೆ. ಇನ್ನೂ ಸಾವಿರಾರು ಜನ ಬರುವುದಕ್ಕೆ ಸಿದ್ಧವಿದ್ದಾರೆ. ಆದರೆ, ಅವರು ಬರದಂತೆ ಬೆದರಿಕೆ ಹಾಕಲಾಗುತ್ತಿದೆ. ಮುಂದೆ ಬರುವಂಥವರಿಗೆ ಎಲ್ಲಾ ರೀತಿಯ ಭದ್ರತೆ ನೀಡುತ್ತೇವೆ. ಪೊಲೀಸ್ ಭದ್ರತೆಯನ್ನು ಸಹ ನೀಡಲಾಗುವುದು. ಹೆದರದೆ ಬಂದು ಧೈರ್ಯವಾಗಿ ಬಸ್ ಚಲಾಯಿಸಿ. ಜನರಿಗೆ ಆಗುತ್ತಿರುವ ಸಮಸ್ಯೆಯನ್ನು ನಿವಾರಣೆ ಮಾಡಬೇಕು. ನೌಕರರ ವಿರುದ್ಧವೇ ಹೋರಾಟ ಮಾಡುವುದನ್ನು ತಪ್ಪಿಸಬೇಕು. 6ನೇ ವೇತನ ಆಯೋಗ ಹೊರತುಪಡಿಸಿ ಇನ್ನುಳಿದ ಬೇಡಿಕೆಯಲ್ಲಿ ಏನಾದರೂ ಕೊರತೆಯಿದ್ದರೆ ಸರಿಪಡಿಸುವುದಕ್ಕೆ ಸರ್ಕಾರ ಸಿದ್ಧವಿದೆ ಎಂದರು.

ಕೋವಿಡ್ ಕಾರಣದಿಂದ ಸಾರಿಗೆ ಇಲಾಖೆ ನಷ್ಟದಲ್ಲಿದೆ. ಆದರೂ ಸರ್ಕಾರದ ಬೊಕ್ಕಸದಿಂದಲೇ ಸಾರಿಗೆ ನೌಕರರಿಗೆ 2300 ಕೋಟಿ ರು. ವೇತನ ನೀಡಲಾಗಿದೆ. ಇದು ಅವರಿಗೆ ಅರ್ಥವಾಗುವುದಿಲ್ಲವೆಂದರೆ ಏನು ಮಾಡಲು ಸಾಧ್ಯ. ಸರ್ಕಾರಕ್ಕೆ ಬರುವ ಆದಾಯದಲ್ಲಿ ಶೇ.85ರಷ್ಟು ಹಣವನ್ನು ಸರ್ಕಾರಿ ನೌಕರರ ವೇತನ, ಪಿಂಚಣಿ ಇತರೆ ಕಾರ್ಯಗಳಿಗೆ ನೀಡಲಾಗುತ್ತಿದೆ. ಶೇ.15ರಷ್ಟು ಹಣವನ್ನು ಅಭಿವೃದ್ಧಿ ಕಾರ್ಯಗಳಿಗೆ ಬಳಸುತ್ತಿದ್ದೇವೆ. ಸಾರಿಗೆ ಇಲಾಖೆ ನಷ್ಟದಲ್ಲಿದ್ದರೂ ಒಂದು ತಿಂಗಳ ವೇತನವನ್ನೂ ವಿಳಂಬ ಮಾಡದೆ ನೀಡಲಾಗುತ್ತಿದೆ. ಹಠಮಾರಿ ಧೋರಣೆ ಸರಿಯಲ್ಲ ಎಂದು ಮುಖ್ಯಮಂತ್ರಿಗಳು ಬೇಸರ ವ್ಯಕ್ತಪಡಿಸಿದರು.

ಯಾವುದೇ ಸಮಸ್ಯೆಗಳಿದ್ದರೂ ಮಾತುಕತೆಗೆ ಬನ್ನಿ ಎಂದರೂ ಬರುತ್ತಿಲ್ಲ. ನೌಕರರ ಹಠಮಾರಿ ಧೋರಣೆಯಿಂದ ಲಕ್ಷಾಂತರ ಜನರು ಬಸ್‌ಗಳಿಲ್ಲದೆ ಪರದಾಡುತ್ತಿದ್ದಾರೆ. ಇದು ನೌಕರರಿಗೆ ಶೋಭೆ ತರುವುದಿಲ್ಲ ಎಂದು ಹೇಳಿದರು.

# 10,000 ಖಾಸಗಿ ಬಸ್‌ಗೆ ಪರ್ಮಿಟ್

**ಬೀದರ್:** ಸಾರಿಗೆ ಇಲಾಖೆ ಸಿಬ್ಬಂದಿ ಹಠಮಾರಿ ಧೋರಣೆ ಕೈಬಿಡದಿದ್ದಲ್ಲಿ ಪ್ರಯಾಣಿಕರಿಗೆ ತೊಂದರೆಯಾಗಲು ಸರ್ಕಾರವೂ ಬಿಡೊಲ್ಲ ಎಂದು ಸ್ಪಷ್ಟಪಡಿಸಿರುವ ಸಾರಿಗೆ ಸಚಿವ ಲಕ್ಷ್ಮಣ್ ಸವದಿ, ಶನಿವಾರದಿಂದ 10 ಸಾವಿರ ಖಾಸಗಿ ಬಸ್‌ಗಳ ಸಂಚಾರಕ್ಕೆ ಅನುವು ಮಾಡಿಕೊಡುತ್ತಿರುವುದಾಗಿ ತಿಳಿಸಿದ್ದಾರೆ.



ಇದೇವೇಳೆ ಮುಷ್ಕರದಿಂದ ಬಹಳಷ್ಟು ತೊಂದರೆಯಾಗುತ್ತಿದ್ದು ಹಬ್ಬದ ವೇಳೆಯಾದರೂ ಹಠ ತೊರೆದು ಕೆಲಸಕ್ಕೆ ಹಾಜರಾಗಿ, ನಾವು ರಕ್ಷಣೆ ಒದಗಿಸುತ್ತೇವೆ ಎಂದು ಮತ್ತೊಮ್ಮೆ ಮನವಿ ಮಾಡಿದ್ದಾರೆ. ಬಸವಕಲ್ಯಾಣದಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಯಾಣಕರಿಗೆ ತೊಂದರೆಯಾಗಲು ಸರ್ಕಾರ ಬಿಡುವುದಿಲ್ಲ. ನಿವೃತ್ತ ನೌಕರರಿಗೂ ಸೇವೆಗೆ ಮರಳಿ ಬರುವಂತೆ ಕರೆ ಕೊಟ್ಟಿದ್ದೇವೆ, ಮಾಜಿ ಸೈನಿಕರಿಗೂ ಮನವಿ ಮಾಡಿದ್ದೇವೆ, ಖಾಸಗಿ ವಾಹನಗಳಿಗೆ ಪರವಾನಗಿ ನೀಡಲು ಆರಂಭಿಸಿದ್ದೇವೆ. ಶನಿವಾರ 10 ಸಾವಿರ ಖಾಸಗಿ ಸಾರಿಗೆ ವಾಹನಗಳಿಗೆ ಪರ್ಮಿಟ್ ನೀಡುತ್ತೇವೆ ಎಂದರು.

**ಕರ್ತವ್ಯಕ್ಕೆ ಅಡ್ಡಿಪಡಿಸಿದ್ರೆ ಕಠಿಣ ಕ್ರಮ:** ಈ ಮುಷ್ಕರವನ್ನೇ ಪ್ರತಿಷ್ಠೆಯಾಗಿ ಪರಿಗಣಿಸಿರುವ ಕೆಲವರು, ನೌಕರರ ಕರ್ತವ್ಯ ನಿರ್ವಹಣೆಗೆ ಅಡ್ಡಿಪಡಿಸುತ್ತಿದ್ದಾರೆ. ಇಂತಹ ಕಾನೂನು ವಿರೋಧಿ ಕೃತ್ಯಗಳನ್ನು ಸಹಿಸಲು ಸಾಧ್ಯವಿಲ್ಲ. ನಮ್ಮ ಕರೆಗೆ ಓಗೊಟ್ಟು ಯಾರೇ ಕರ್ತವ್ಯಕ್ಕೆ ಹಾಜರಾದರೂ ಸೂಕ್ತ ರಕ್ಷಣೆ ಕಲ್ಪಿಸುವುದು ಸರ್ಕಾರದ ಹೊಣೆಯಾಗಿದೆ. ಈ ಬಗ್ಗೆ ಯಾವುದೇ ಆತಂಕ ಇಲ್ಲ ಎಂದಿದ್ದಾರೆ.